# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 485 (517) |
| ಸದಸ್ಯರ ಹೆಸರು | ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | 20.02.2023 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತುತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಎಷ್ಟು ಕಚೇರಿಗಳು ಸ್ವಂತ ಜಾಗದಲ್ಲಿವೆ; ಈ ಕಚೇರಿಗಳಿಗೆ ಒದಗಿಸಿದ ಸೌಲಭ್ಯಗಳೇನು; | ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 6 ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳು ಇರುತ್ತವೆ. ಇವುಗಳಲ್ಲಿ 3 ಕಛೇರಿಗಳು ಸ್ವಂತ ಕಟ್ಟಡ ಹೊಂದಿರುತ್ತವೆ.<br><br>**ಶಿವಮೊಗ್ಗ ಪ್ರಾದೇಶಿಕ ಕಛೇರಿ** – ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ.<br>**ಮೈಸೂರು ಪ್ರಾದೇಶಿಕ ಕಛೇರಿ** – ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ<br>**ಬೆಂಗಳೂರು ಪ್ರಾದೇಶಿಕ ಕಛೇರಿ** – ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ<br>**ಧಾರವಾಡ ಪ್ರಾದೇಶಿಕ ಕಛೇರಿ** – ಧಾರವಾಡದ ಮಿನಿ ವಿಧಾನ ಸೌಧದಲ್ಲಿ ಕಾರ್ಯನಿರ್ವಹಿಸುತ್ತಿದೆ.<br>**ಕಲಬುರಗಿ ಪ್ರಾದೇಶಿಕ ಕಛೇರಿ** - ಕಲಬುರಗಿಯ ಸರ್ಕಾರಿ ಕಾಲೇಜು(ಸ್ವಾಯತ್ತ) ಇಲ್ಲಿನ ಸ್ನಾತಕೋತ್ತರ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ.<br>**ಮಂಗಳೂರು ಪ್ರಾದೇಶಿಕ ಕಛೇರಿ** - ಮಂಗಳೂರು ವಿಶ್ವವಿದ್ಯಾಲಯದ ಘಟಕ ಕಾಲೇಜು ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ. |
| (ಆ) | ಕಲಬುರಗಿಯಲ್ಲಿ ಜಂಟಿ ನಿರ್ದೇಶಕರ ಕಚೇರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಇದ್ದು, ಸದರಿ ಸ್ಥಳದಲ್ಲಿ ಮೂಲಸೌಕರ್ಯಗಳ ಕೊರತೆ ಇರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ಜಂಟಿ ನಿರ್ದೇಶಕರ ಕಚೇರಿಯೇ ಕಾಲೇಜಿನ ಸ್ಥಳದಲ್ಲಿರುವಾಗ ಉನ್ನತ ಮಟ್ಟದ ಶಿಕ್ಷಣ ಸೌಲಭ್ಯಗಳನ್ನು ಕಾಲೇಜುಗಳಿಗೆ ಕಲ್ಪಿಸಲು | ಕಲಬುರಗಿ ಜಂಟಿ ನಿರ್ದೇಶಕರ ಕಛೇರಿಯು ಸ್ಥಾಪನೆಯಾದ ದಿನಾಂಕದಿಂದ ಮಿನಿ ವಿಧಾನ ಸೌಧದ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ಕಟ್ಟಡವು ಮಳೆ ಬಂದಾಗ ಸೋರುತ್ತಿದ್ದುದರಿಂದ ಹಾಗೂ ಕಛೇರಿಯು ಬಹಳ ಚಿಕ್ಕದಾಗಿದ್ದರಿಂದ ಸಿಬ್ಬಂದಿಗಳಿಗೆ ಕರ್ತವ್ಯ ನಿರ್ವಹಿಸಲು ತೊಂದರೆಯಾಗುತ್ತಿದ್ದ ಹಿನ್ನೆಲೆಯಲ್ಲಿ ದಿನಾಂಕ : 01.07.2020 |

| | | |
|---|---|---|
| | ತೊಂದರೆಯಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ಕ್ರಮವಹಿಸುವುದೇ; | ರಂದು ಕಲಬುರಗಿ ನಗರದ ಸರ್ಕಾರಿ ಮಹಾವಿದ್ಯಾಲಯ(ಸ್ವಾಯತ್ತ)ದ ಪಿ.ಜಿ. ಕಟ್ಟಡಕ್ಕೆ ಸ್ಥಳಾಂತರಿಸಲಾಗಿರುತ್ತದೆ.<br><br>ಸದರಿ ಸರ್ಕಾರಿ ಮಹಾವಿದ್ಯಾಲಯ (ಸ್ವಾಯತ್ತ) ದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳಿದ್ದು ಸುಮಾರು 4330 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. ಸದರಿ ಕಾಲೇಜಿಗೆ ವಿಶೇಷ ಅಭಿವೃದ್ಧಿ ಯೋಜನೆಯಡಿ 2016-17ನೇ ಸಾಲಿನಲ್ಲಿ ರೂ.500.00 ಲಕ್ಷಗಳನ್ನು ಮತ್ತು 2021-22ನೇ ಸಾಲಿನಲ್ಲಿ ರೂ.400.00 ಲಕ್ಷಗಳನ್ನು ಕಟ್ಟಡ ಮೂಲಸೌಕರ್ಯಗಳಿಗಾಗಿ ಒದಗಿಸಲಾಗಿರುತ್ತದೆ. ಸದರಿ ಕಛೇರಿಯು ಹೆಚ್ಚುವರಿ ಸ್ನಾತಕೋತ್ತರ ಕಟ್ಟಡದಲ್ಲಿರುವುದರಿಂದ ಉನ್ನತ ಮಟ್ಟದ ಶಿಕ್ಷಣ ಮತ್ತು ಸೌಲಭ್ಯಗಳನ್ನು ಕಾಲೇಜುಗಳಿಗೆ ಕಲ್ಪಿಸಲು ತೊಂದರೆಯಾಗುವುದಿಲ್ಲ.<br><br>ಇದಲ್ಲದೇ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಸಲ್ಲಿಸಲಾದ ಪ್ರಸ್ತಾವನೆಯಲ್ಲಿ ಸದರಿ ಕಾಲೇಜಿನ ಕಟ್ಟಡ ಮೂಲ ಸೌಕರ್ಯಗಳಿಗಾಗಿ ರೂ.370.00 ಲಕ್ಷಗಳನ್ನು ಮತ್ತು ಶೈಕ್ಷಣಿಕ ಉದ್ದೇಶಗಳಿಗಾಗಿ ರೂ.82.00 ಲಕ್ಷಗಳನ್ನು ನಿಗಧಿಪಡಿಸಲಾಗಿರುತ್ತದೆ. |
| (ಈ) | ಜಂಟಿ ನಿರ್ದೇಶಕರುಗಳು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಭೇಟಿ ನೀಡಿ ಕಾಲೇಜುಗಳ ಮತ್ತು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತಾರೆಯೇ? (ವಿವರ ನೀಡುವುದು) | ಜಂಟಿ ನಿರ್ದೇಶಕರುಗಳು ಆಗಿಂದ್ದಾಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಭೇಟಿ ನೀಡಿ ಕಾಲೇಜುಗಳ ಹಾಗೂ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಿ ಸ್ಥಳೀಯವಾಗಿಯೇ ಸಮಸ್ಯೆಗಳನ್ನು ಬಗೆಹರಿಸಲಾಗುತ್ತಿದೆ. ಇನ್ನೂ ಹೆಚ್ಚಿನ ಕ್ರಮದ ಅವಶ್ಯಕತೆ ಕಂಡು ಬಂದಲ್ಲಿ ಕೇಂದ್ರ ಕಛೇರಿಗೆ ವರದಿ ಸಲ್ಲಿಸಲಾಗುತ್ತದೆ. |

ಸಂಖ್ಯೆ: ಇಡಿ 46 ಹೆಚ್‌ಪಿಸಿ 2023)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು.